**All India Radio: Bangalore**
**National Bulletin In Kannada**
**23.03.2026 13.10 hrs**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

**23.03.2026 13.10 hrs**

**<>><><*><><<>**

ಮುಖ್ಯಾಂಶಗಳು

**೧. ಅಸ್ಸಾಂ, ಕೇರಳಂ ಪುದುಚೇರಿ ವಿಧಾನಸಭಾ ಚುನಾವಣೆ ; ಇಂದು ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ಅಂತ್ಯ ; ನಾಳೆ ಪರಿಶೀಲನೆ**

**೨. ಶಹೀದ್ ದಿವಸ್ ; ರಾಜ್ಯಸಭೆ, ಲೋಕಸಭೆಯಲ್ಲಿ ಭಗತ್ ಸಿಂಗ್, ರಾಜ್‌ಗುರು, ಸುಖ್‌ದೇವ್ ಅವರಿಗೆ ಗೌರವ ನಮನ**

**೩. ಕೇರಳಂಗೆ ರಾಷ್ಟ್ರೀಯ ವಿಪತ್ತು ತಡೆ ನಿಧಿಯಡಿ ೩೧೨ ಕೋಟಿ ರೂಪಾಯಿ ಬಿಡುಗಡೆ; ಲೋಕಸಭೆಯಲ್ಲಿ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಮಾಹಿತಿ**

**೪. ೨೪ನೇ ರಾಷ್ಟ್ರೀಯ ಪ್ಯಾರಾ ಅಥ್ಲೆಟಿಕ್ಸ್ ಚಾಂಪಿಯನ್ ಶಿಫ್ ; ಮಹಿಳಾ ಜಾವಲಿನ್ ಎಸೆತದಲ್ಲಿ ಕಿಪ ಮೆರೊಗೆ ಚಿನ್ನದ ಪದಕ**

**೫. ಸ್ಪ್ಯಾನಿಶ್ ಪ್ಯಾರಾ ಬ್ಯಾಡ್ಮಿಂಟನ್ ಅಂತಾರಾಷ್ಟ್ರೀಯ ಪಂದ್ಯಾವಳಿ ; ಭಾರತದ ಪ್ರಮೋದ್ ಭಗತ್ ೨ ಚಿನ್ನ, ೧ ಬೆಳ್ಳಿ ಪದಕ**

**<>><><*><><<>**

ಅಸ್ಸಾಂ, ಕೇರಳ ಮತ್ತು ಪುದುಚೇರಿ ವಿಧಾನಸಭಾ ಚುನಾವಣೆಗಳಿಗೆ ನಾಮಪತ್ರ ಸಲ್ಲಿಸಲು ಇಂದು ಕೊನೆಯ ದಿನವಾಗಿದೆ. ಇಂದು ಮಧ್ಯಾಹ್ನ ೩ ಗಂಟೆಗೆ ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ಪೂರ್ಣಗೊಳ್ಳಲಿದ್ದು, ನಾಮಪತ್ರಗಳ ಪರಿಶೀಲನೆ ನಾಳೆ ನಡೆಯಲಿದೆ. ನಾಮಪತ್ರ ಹಿಂಪಡೆಯಲು ಇದೇ ೨೬ ಕೊನೆಯ ದಿನವಾಗಿದೆ. ಈ ಎರಡು ರಾಜ್ಯಗಳು ಹಾಗೂ ಒಂದು ಕೇಂದ್ರಾಡಳಿತ ಪ್ರದೇಶದಲ್ಲಿ ಏಪ್ರಿಲ್ ೯ರಂದು ಒಂದೇ ಹಂತದಲ್ಲಿ ಮತದಾನ ನಡೆಯಲಿದೆ. ಅಸ್ಸಾಂನಲ್ಲಿ ಇಂದು ಪ್ರಮುಖ ಅಭ್ಯರ್ಥಿಗಳು ತಮ್ಮ ಉಮೇದುವಾರಿಕೆ ಸಲ್ಲಿಸುತ್ತಿದ್ದಾರೆ. ಅಸ್ಸಾಂ ಪ್ರದೇಶ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಗೌರವ್ ಗೊಗೊಯ್ ಜೋರ್ಹತ್ ಕ್ಷೇತ್ರದಿಂದ ಹಾಗೂ ಮತ್ತೊಬ್ಬ ಕಾಂಗ್ರೆಸ್ ಅಭ್ಯರ್ಥಿ ಮೀರಾ ಬೋರ್ಠಾಕೂರ್, ದಿಸ್‌ಪುರದಿಂದ ನಾಮಪತ್ರ ಸಲ್ಲಿಸುತ್ತಿದ್ದಾರೆ. ಅಸ್ಸಾಂ ಗಣ ಪರಿಷತ್ ಅಧ್ಯಕ್ಷ ಅತುಲ್ ಬೋರಾ, ಗೋಲಾಘಾಟ್‌ನಿಂದ ಹಾಗೂ ಬಿಜೆಪಿಯ ಜಯಂತ ಮಲ್ಲ ಬರುವಾ, ನಲ್ಬಾರಿ ಕ್ಷೇತ್ರದಿಂದ ಸ್ಪರ್ಧಿಸುತ್ತಿದ್ದು, ಇಂದು ನಾಮಪತ್ರ ಸಲ್ಲಿಸಲಿದ್ದಾರೆ. ಕೇರಳದಲ್ಲೂ ೧೪೦ ಕ್ಷೇತ್ರಗಳಲ್ಲಿ ಅಭ್ಯರ್ಥಿಗಳು ನಾಮಪತ್ರ ಸಲಿಸುತ್ತಿದ್ದಾರೆ. ಚುನಾವಣಾ ಕಣವು ಕಳೆಗಟ್ಟುತ್ತಿದ್ದು, ಪ್ರಮುಖ ರಾಜಕೀಯ ಪಕ್ಷಗಳ ಮುಖಂಡರ ಉಮೇದುವಾರಿಕೆ ಸಲ್ಲಿಕೆಯಿಂದಾಗಿ ರಾಜಕೀಯ ಚಟುವಟಿಕೆಗಳು ಬಿರುಸುಗೊಂಡಿವೆ.

**<>><><*><><<>**

ಶಹೀದ್ ದಿನವಾದ ಇಂದು ಕ್ರಾಂತಿಕಾರಿ ಸ್ವಾತಂತ್ರ್ಯ ಹೋರಾಟಗಾರರಾದ ಭಗತ್ ಸಿಂಗ್, ರಾಜ್‌ಗುರು ಮತ್ತು ಸುಖದೇವ್ ಅವರ ಬಲಿದಾನವನ್ನು ಸ್ಮರಿಸಲಾಗುತ್ತಿದೆ. ಈ ದಿನದ ಹಿನ್ನೆಲೆ ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್,

ಪ್ರಧಾನಿ ನರೇಂದ್ರ ಮೋದಿ ಸೇರಿದಂತೆ ಅನೇಕ ಗಣ್ಯರು ಸ್ವಾತಂತ್ರ್ಯಕ್ಕಾಗಿ ತಮ್ಮ ಪ್ರಾಣವನ್ನೇ ತ್ಯಾಗ ಮಾಡಿದ ಭಗತ್ ಸಿಂಗ್, ರಾಜ್‌ಗುರು ಮತ್ತು ಸುಖದೇವ್ ಅವರಿಗೆ ಗೌರವ ನಮನ ಸಲ್ಲಿಸಿದ್ದಾರೆ. ತಮ್ಮ ಸಂದೇಶದಲ್ಲಿ ಉಪರಾಷ್ಟ್ರಪತಿ ಈ ಮಹಾನ್ ಹೋರಾಟಗಾರರ ಅದಮ್ಯ ಸಾಹಸ, ಅಚಲ ಸಂಕಲ್ಪ ಮತ್ತು ರಾಷ್ಟ್ರಕ್ಕಾಗಿ ಅವರು ನೀಡಿದ ಬಲಿದಾನ ದೇಶ ಪ್ರೇಮ ಮತ್ತು ನಿಸ್ವಾರ್ಥ ಸೇವೆಯ ಆದರ್ಶಗಳನ್ನು ಪ್ರತಿಬಿಂಬಿಸುತ್ತದೆ ಎಂದಿದ್ದಾರೆ. ತಮ್ಮ ಸಂದೇಶದಲ್ಲಿ ಪ್ರಧಾನಿ, ಅತ್ಯಂತ ಚಿಕ್ಕ ವಯಸ್ಸಿನಲ್ಲಿ ಈ ಮಹಾನ್ ಸ್ವಾತಂತ್ರ್ಯ ಹೋರಾಟಗಾರರು ತೋರಿದ ಅಸಾಧಾರಣ ಧೈರ್ಯ ಮತ್ತು ದೇಶದ ಕುರಿತು ಬದ್ಧತೆ ಸ್ಮರಣೀಯವಾದುದು ಎಂದಿದ್ದಾರೆ.

**<>><><*><><<>**

ಪಶ್ಚಿಮ ಬಂಗಾಳದಲ್ಲಿ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಪ್ರಕ್ರಿಯೆ ಅಡಿ ಮೊದಲ ಪೂರಕ ಮತದಾರರ ಪಟ್ಟಿಯನ್ನು ಚುನಾವಣಾ ಆಯೋಗ ಇಂದು ಪ್ರಕಟಿಸಲಿದೆ. ದಾಖಲೆಗಳ ಪರಿಶೀಲನೆ ಪೂರ್ಣಗೊಂಡಿರುವ ಬಾಕಿ ಪಟ್ಟಿಯ ಮತದಾರರ ಹೆಸರುಗಳು ಇದರಲ್ಲಿ ಸೇರಿವೆ. ಒಟ್ಟು ೧೭ ಲಕ್ಷ ಬಾಕಿ ದಾಖಲೆಗಳನ್ನು ವಿಲೇವಾರಿ ಮಾಡಲಾಗಿದ್ದು, ದಿನವೊಂದಕ್ಕೆ ಸರಾಸರಿ ೧ ಲಕ್ಷ ಹೆಸರುಗಳನ್ನು ಪ್ರಕ್ರಿಯೆಗೊಳಿಸಲಾಗಿದೆ.

**<>><><*><><<>**

ಮುಂಬರುವ ವಿಧಾನಸಭಾ ಚುನಾವಣೆಯ ಸಿದ್ಧತೆಗಳನ್ನು ಪರಾಮರ್ಶಿಸಲು ಪಶ್ಚಿಮ ಬಂಗಾಳದಲ್ಲಿಂದು ಭಾರತೀಯ ಚುನಾವಣಾ ಆಯೋಗ ಇಂದು ಎಲ್ಲಾ ಜಿಲ್ಲಾ ಚುನಾವಣಾಧಿಕಾರಿಗಳು, ಪೊಲೀಸ್ ಆಯುಕ್ತರು ಮತ್ತು ಪೊಲೀಸ್ ವರಿಷ್ಠಾಧಿಕಾರಿಗಳೊಂದಿಗೆ ಮಹತ್ವದ ಸಭೆ ನಡೆಸಲಿದೆ. ಹಿರಿಯ ಉಪ ಚುನಾವಣಾ ಆಯುಕ್ತ ಮನೀಶ್ ಗಾರ್ಗ್ ಅವರ ಅಧ್ಯಕ್ಷತೆಯಲ್ಲಿ ಇಂದು ಸಂಜೆ ವಿಡಿಯೋ ಕಾನ್ಫರೆನ್ಸಿಂಗ್ ಮೂಲಕ ಈ ಸಭೆ ನಡೆಯಲಿದೆ. ಈ ಉನ್ನತ ಮಟ್ಟದ ಸಭೆಯಲ್ಲಿ ಹಿರಿಯ ಉಪ ಚುನಾವಣಾ ಆಯುಕ್ತರಾದ ಜ್ಞಾನೇಶ್ ಭಾರ್ತಿ ಮತ್ತು ಪವನ್ ಕುಮಾರ್ ಶರ್ಮಾ ಹಾಗೂ ರಾಜ್ಯದ ಮುಖ್ಯ ಚುನಾವಣಾಧಿಕಾರಿ ಮನೋಜ್ ಕುಮಾರ್ ಅಗರ್ವಾಲ್ ಉಪಸ್ಥಿತರಿರಲಿದ್ದಾರೆ.

**<>><><*><><<>**

ಸಂಸತ್ತಿನ ಉಭಯ ಸದನಗಳಾದ ಲೋಕಸಭೆ ಮತ್ತು ರಾಜ್ಯಸಭೆಯಲ್ಲಿಂದು ಕ್ರಾಂತಿಕಾರಿ ಸ್ವಾತಂತ್ರ್ಯ ಹೋರಾಟಗಾರರಾದ ಭಗತ್‌ಸಿಂಗ್, ರಾಜಗುರು ಮತ್ತು ಸುಖದೇವ್ ಅವರನ್ನು ಸ್ಮರಿಸುವ ಹುತಾತ್ಮರ ದಿನದ ಅಂಗವಾಗಿ ಅವರಿಗೆ ಗೌರವ ನಮನ ಸಲ್ಲಿಸಲಾಯಿತು. ಲೋಕಸಭಾಧ್ಯಕ್ಷ ಓಂಬಿರ್ಲಾ ಹುತಾತ್ಮರಿಗೆ ಶ್ರದ್ಧಾಂಜಲಿ ಅರ್ಪಿಸಿ ಮಾತನಾಡಿ, ಅತ್ಯಂತ ಕಿರಿ ವಯಸ್ಸಿನಲ್ಲಿ ಈ ವೀರಯೋಧರು ದೇಶದ ಸ್ವಾತಂತ್ರ್ಯಕ್ಕಾಗಿ ಅಪ್ರತಿಮ ಸಾಹಸದಿಂದ ಹೋರಾಡಿ, ತಮ್ಮ ಪ್ರಾಣ ತ್ಯಾಗ ಮಾಡಿದ್ದಾರೆ. ಅವರ ಧೈರ್ಯ, ಶೌರ್ಯ ಮತ್ತು ಅಚಲ ದೇಶ ಪ್ರೇಮ ಸ್ವಾತಂತ್ರ್ಯದ ಜೊತೆಗೆ ಸದೃಢ ಭಾರತಕ್ಕೆ ಭದ್ರ ಬುನಾದಿ ಹಾಕಿಕೊಟ್ಟಿದೆ ಎಂದು ತಿಳಿಸಿದರು.

**ಧ್ವನಿ: ಓಂಬಿರ್ಲಾ**

ರಾಜ್ಯ ಸಭಾಪತಿ ಸಿ.ಪಿ.ರಾಧಾಕೃಷ್ಣನ್ ಮಾತನಾಡಿ, ೧೯೩೧ರ ಮಾರ್ಚ್ ೨೩ರಂದು ರಾಷ್ಟ್ರಕ್ಕಾಗಿ ಪ್ರಾಣ ತೆತ್ತ ಈ ವೀರರ ಸ್ಮರಣಾರ್ಥ ದೇಶವು ಇಂದು ಹುತಾತ್ಮರ ದಿನವನ್ನು ಆಚರಿಸುತ್ತಿದೆ. ಅದೊಂದು ಕೇವಲ ಐತಿಹಾಸಿಕ ಘಟನೆ ಅಲ್ಲ ಬದಲಾಗಿ, ವಸಾಹತುಶಾಹಿ ಆಡಳಿತದ ವಿರುದ್ಧ ಲಕ್ಷಾಂತರ ಜನರನ್ನು ಒಗ್ಗೂಡಿಸಿ ರಾಷ್ಟ್ರಪ್ರೇಮವನ್ನು ಜಾಗೃತಗೊಳಿಸಿದ ಮಹತ್ವದ ಕ್ಷಣವಾಗಿದೆ ಎಂದು ಸ್ಮರಿಸಿದರು.

**<>><><*><><<>**

ಕೇರಳ ರಾಜ್ಯಕ್ಕೆ ರಾಷ್ಟ್ರೀಯ ವಿಪತ್ತು ತಡೆ ನಿಧಿಯಡಿ ಸುಮಾರು ೩೧೨ ಕೋಟಿ ರೂಪಾಯಿಗಳನ್ನು ಮಂಜೂರು ಮಾಡಲಾಗಿದ್ದರೂ, ರಾಜ್ಯ ಸರ್ಕಾರ ಈ ಹಣವನ್ನು ಬಳಸಿಕೊಂಡಿಲ್ಲ ಎಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ತಿಳಿಸಿದ್ದಾರೆ. ಲೋಕಸಭೆಯ ಪ್ರಶ್ನೋತ್ತರ ಕಲಾಪದ ವೇಳೆ ಪೂರಕ ಪ್ರಶ್ನೆಗಳಿಗೆ ಉತ್ತರಿಸಿದ ಅವರು, ಕೇರಳ ರಾಜ್ಯ ಸರ್ಕಾರ ಬಳಕೆ ಪ್ರಮಾಣಪತ್ರಗಳನ್ನು ಸಲ್ಲಿಸಿದ ನಂತರವಷ್ಟೇ ಮುಂದಿನ ಹಂತದ ಹಣವನ್ನು ಬಿಡುಗಡೆ ಮಾಡಲಾಗುವುದು ಎಂದು ಸ್ಪಷ್ಟ ಪಡಿಸಿದರು. ಮಂಜೂರಾದ ಒಟ್ಟು ಮೊತ್ತದಲ್ಲಿ ವಾಯ್ನಾಡಿನ ಭೂಕುಸಿತ ಪೀಡಿತ ಪ್ರದೇಶಗಳಲ್ಲಿನ ಯೋಜನೆಗಳಿಗಾಗಿ ೭೨ ಕೋಟಿ ರೂಪಾಯಿ ಮತ್ತು ತಿರುವನಂತಪುರದ ನಗರ ಪ್ರವಾಹ ಅಪಾಯ ನಿರ್ವಹಣಾ ಕಾರ್ಯಕ್ರಮಕ್ಕಾಗಿ ೨೨೨ ಕೋಟಿ ರೂಪಾಯಿಗಳನ್ನು ನಿಗದಿಪಡಿಸಲಾಗಿದೆ. ಆದರೆ ಅನುಮೋದಿತ ಮೊತ್ತವನ್ನು ಪಡೆಯಲು ಕೇರಳ ಸರ್ಕಾರ ಇದುವರೆಗೆ ಆಸಕ್ತಿ ತೋರಿಲ್ಲ ಎಂದು ತಿಳಿಸಿದ್ದಾರೆ.

**<><><*><><<>**

ದೇಶಾದ್ಯಂತ ಪರಿಸರ ಸ್ನೇಹಿ ಸಾರ್ವಜನಿಕ ಸಾರಿಗೆಯನ್ನು ಬಲಪಡಿಸುವ ಉದ್ದೇಶದ ಪಿಎಂ ಇ-ಬಸ್ ಸೇವಾ ಯೋಜನೆಯು ಯಶಸ್ವಿಯಾಗಿ ಜಾರಿಗೆ ಬಂದಿದ್ದು, ಕಳೆದ ತಿಂಗಳು ಮೊದಲ ಹಂತದ ೨೨೫ ವಿದ್ಯುತ್ ಚಾಲಿತ ಬಸ್‌ಗಳನ್ನು ವಿತರಿಸಲಾಗಿದೆ ಎಂದು ಕೇಂದ್ರ ಸಚಿವ ಮನೋಹರ್ ಲಾಲ್ ತಿಳಿಸಿದ್ದಾರೆ. ರಾಜ್ಯಸಭೆಯ ಪ್ರಶ್ನೋತ್ತರ ಕಲಾಪದ ವೇಳೆ ಮಾಹಿತಿ ನೀಡಿದ ಅವರು, ಈಗಾಗಲೇ ವಿವಿಧ ರಾಜ್ಯಗಳು ಸುಮಾರು ೬ ಸಾವಿರದ ೫೦೦ ಬಸ್‌ಗಳ ಪೂರೈಕೆಗಾಗಿ ಒಪ್ಪಂದಗಳಿಗೆ ಸಹಿ ಹಾಕಿವೆ. ಈ ಯೋಜನೆಯ ಒಟ್ಟು ಅಂದಾಜು ವೆಚ್ಚ ೫೬ ಸಾವಿರದ ೬೧೩ ಕೋಟಿ ರೂಪಾಯಿಯಾಗಿದ್ದು, ಇದರಲ್ಲಿ ಕೇಂದ್ರ ಸರ್ಕಾರ ೨೦ ಸಾವಿರ ಕೋಟಿ ರೂಪಾಯಿಗಳ ಆರ್ಥಿಕ ನೆರವು ನೀಡುತ್ತಿದೆ ಎಂದು ತಿಳಿಸಿದರು.

**<><><*><><<>**

ದೂರದರ್ಶಿ ನಾಯಕ, ಸ್ವಾತಂತ್ರ್ಯ ಸಾಮಾಜಿಕ ನ್ಯಾಯದ ಹರಿಕಾರರಾಗಿದ್ದ ಡಾ.ರಾಮ್ ಮನೋಹರ್ ಲೋಹಿಯಾ ಅವರ ಜನ್ಮದಿನವಾದ ಇಂದು ಅವರಿಗೆ ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್, ಪ್ರಧಾನಿ ನರೇಂದ್ರ ಮೋದಿ ಸೇರಿದಂತೆ ಅನೇಕ ಗಣ್ಯರು ಗೌರವ ನಮನ ಸಲ್ಲಿಸಿದ್ದಾರೆ. ತಮ್ಮ ಸಂದೇಶದಲ್ಲಿ ಉಪರಾಷ್ಟ್ರಪತಿ ಪ್ರಜಾಪ್ರಭುತ್ವ, ಸಾಮಾಜಿಕ ನ್ಯಾಯ ಮತ್ತು ಸಮಾಜದ ವಂಚಿತ ವರ್ಗಗಳ ಸಬಲೀಕರಣ ಕುರಿತಾದ ಲೋಹಿಯಾ ಅವರ ವಿಚಾರಗಳು ದೇಶದ ಸಾರ್ವಜನಿಕ ಬದುಕಿನ ಮೇಲೆ ಅಚ್ಚಳಿಯದ ಗುರುತಾಗಿ ಉಳಿದಿವೆ ಎಂದಿದ್ದಾರೆ.

**<><><*><><<>**

ಇರಾನ್‌ನಿಂದ ಉಡಾಯಿಸಲಾದ ಕ್ಷಿಪಣಿ ಮತ್ತು ಡ್ರೋನ್ ದಾಳಿಗಳನ್ನು ಯುಎಇ ವಾಯು ರಕ್ಷಣಾ ವ್ಯವಸ್ಥೆಯು ಯಶಸ್ವಿಯಾಗಿ ತಡೆದಿದೆ. ಇಂದು ಮುಂಜಾನೆ ಅಬುದಾಬಿ ಸೇರಿದಂತೆ ಹಲವು ಭಾಗಗಳಲ್ಲಿ ಭಾರೀ ಸ್ಫೋಟದ ಶಬ್ದಗಳು ಕೇಳಿ ಬಂದಿದ್ದು, ಶತ್ರು ಕ್ಷಿಪಣಿಗಳನ್ನು ಆಕಾಶದಲ್ಲೇ ಹೊಡೆದುರುಳಿಸುವಾಗ ಉಂಟಾದ ಶಬ್ದಗಳೆಂದು ಯುಎಇ ರಕ್ಷಣಾ ಸಚಿವಾಲಯ ಖಚಿತಪಡಿಸಿದೆ.

**<><><*><><<>**

ಒಡಿಶಾದ ಭುವನೇಶ್ವರದಲ್ಲಿ ನಡೆಯುತ್ತಿರುವ ೨೪ನೇ ರಾಷ್ಟ್ರೀಯ ಪ್ಯಾರಾ ಅಥ್ಲೆಟಿಕ್ಸ್ ಚಾಂಪಿಯನ್ ಶಿಪ್‌ನ ಮಹಿಳಾ ಜಾವಲಿನ್ ಥ್ರೋ ಎಫ್-೧೨ ವಿಭಾಗದಲ್ಲಿ ಅರುಣಾಚಲಪ್ರದೇಶದ ಕಿಪಾ ಮೆರೊ ಸ್ವರ್ಣ ಪದಕ ಗೆದ್ದಿದ್ದಾರೆ. ಈ ವೇಳೆ ಅವರು ತಮ್ಮದೇ ರಾಷ್ಟ್ರೀಯ ದಾಖಲೆಯನ್ನು ಸಹ ಉತ್ತಮಪಡಿಸಿಕೊಂಡಿದ್ದಾರೆ. ಈ ನಡುವೆ ಮಹಿಳ ೪೦೦ ಮೀಟರ್ ಟಿ-೧೩ ವಿಭಾಗದಲ್ಲಿ ತೆಚಿ ಮೆಟ ಅವರು ಬೆಳ್ಳಿ ಪದಕ ಗೆದ್ದಿದ್ದಾರೆ.

**<>><><*><><<>**

ಸ್ಪೇನ್‌ನ ವಿಕ್ಟೋರಿಯಾದಲ್ಲಿ ಮಾರ್ಚ್ ೧೬ರಿಂದ ೨೨ರವರೆಗೆ ನಡೆದ ಸ್ಪ್ಯಾನಿಶ್ ಪ್ಯಾರಾ ಬ್ಯಾಡ್ಮಿಂಟನ್ ಅಂತಾರಾಷ್ಟ್ರೀಯ ಪಂದ್ಯಾವಳಿಯಲ್ಲಿ ಭಾರತದ ಕ್ರೀಡಾಪಟುಗಳು ಅಭೂತಪೂರ್ವ ಸಾಧನೆ ಮಾಡಿದ್ದಾರೆ. ನಿನ್ನೆ ಮುಕ್ತಾಯಗೊಂಡ ಈ ಪಂದ್ಯಾವಳಿಯಲ್ಲಿ ಭಾರತದ ಪ್ರಮೋದ್ ಭಗತ್ ೨ ಚಿನ್ನ ಮತ್ತು ಒಂದು ಬೆಳ್ಳಿ ಪದಕ ಗೆದಿದ್ದಾರೆ. ಪುರುಷರ ಸಿಂಗಲ್ಸ್ ಎಸ್‌ಎಲ್ ಮೂರು ವಿಭಾಗದ ಫೈನಲ್‌ನಲ್ಲಿ ಪ್ರಮೋದ್ ಭಾರತದವರೇ ಆದ ನಿತೇಶ್ ಕುಮಾರ್ ಅವರನ್ನು ಮಣಿಸಿ ಚಿನ್ನದ ಪದಕ ತಮ್ಮದಾಗಿಸಿಕೊಂಡಿದ್ದಾರೆ. ಪುರುಷರ ಸಿಂಗಲ್ಸ್ ಎಸ್‌ಎಲ್ ನಾಲ್ಕು ವಿಭಾಗದ ಫೈನಲ್‌ನಲ್ಲಿ ಭಾರತದ ಸುಕಾಂತ್ ಕದಮ್, ದಕ್ಷಿಣ ಕೊರಿಯಾದ ಚೊ ನಾಡನ್ ಅವರನ್ನು ಮಣಿಸಿ ಸ್ವರ್ಣ ಪದಕಕ್ಕೆ ಭಾಜನರಾಗಿದ್ದಾರೆ. ಮಹಿಳಾ ಸಿಂಗಲ್ಸ್ ಎಸ್‌ಎಲ್ ಮೂರು ವಿಭಾಗದ ಫೈನಲ್‌ನಲ್ಲಿ ನೀರಜ್ ಕಂಚಿನ ಪದಕ ಗೆದ್ದರೆ, ಪುರುಷರ ಡಬಲ್ಸ್ ಎಸ್‌ಎಲ್ ಮೂರು-ಎಸ್‌ಯು ಐದು ವಿಭಾಗದಲ್ಲಿ ದೀಪ್ ರಂಜನ್ ಬಿಸೋಯ್ ಮತ್ತು ಕುಲ್ದೀಪ್ ಮಹಕುಲ್ ಜೋಡಿ ಕಂಚು ಪದಕ ಹಾಗೂ ಮಿಶ್ರ ಡಬಲ್ಸ್‌ನಲ್ಲಿ ಶಿವಮ್ ಯಾದವ್ ಮತ್ತು ನೀರಜ್ ಹಾಗೂ ನಿತೇಶ್ ಕುಮಾರ್ ಮತ್ತು ತುಳಸಿಮತಿ ಮುರುಗೇಶನ್ ಜೋಡಿಗಳು ಕಂಚಿನ ಪದಕ ಗೆದ್ದಿದೆ.

**<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>**

**<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧.೩೦ ಕ್ಕೆ ><><<>**